# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- 2016-17ನೇ ಸಾಲಿನಲ್ಲಿ ಮತ್ಸ್ಯಾಶ್ರಯ ಯೋಜನೆಯಡಿ ನಿರ್ವಸಿತ ಮೀನುಗಾರರಿಗೆ 3000 ಮನೆಗಳನ್ನು ನಿರ್ಮಾಣ ಮಾಡಲು ಆಡಳಿತಾತ್ಮಕ ಮಂಜೂರಾತಿ ನೀಡುವ ಕುರಿತು.

ಓದಲಾಗಿದೆ:- ಪತ್ರ ಸಂಖ್ಯೆ: ಮೀನಿ/44/ಪಂವಾಯೋ(1)/2016,
ದಿನಾಂಕ: 07-05-2016 ಮತ್ತು 01-06-2016.

******

## ಪ್ರಸ್ತಾವನೆ:

ರಾಜ್ಯ ಸರ್ಕಾರವು 2016-17ನೇ ಸಾಲಿನ ಆಯವ್ಯಯದಲ್ಲಿ "ಮತ್ಸ್ಯಾಶ್ರಯ ಯೋಜನೆಯಡಿ ವಸತಿ ರಹಿತ ಮೀನುಗಾರರಿಗೆ 3000 ಮನೆಗಳನ್ನು ನಿರ್ಮಿಸಲಾಗುವುದು" ಎಂದು ಘೋಷಿಸಿದೆ.

ಮೇಲೆ ಓದಲಾದ ನಿರ್ದೇಶಕರು, ಮೀನುಗಾರಿಕೆ ಇಲಾಖೆ ಇವರ ಪತ್ರಗಳಲ್ಲಿ, ರಾಜ್ಯದಲ್ಲಿ 9.61 ಲಕ್ಷ ಮೀನುಗಾರರ ಪೈಕಿ, ಕರಾವಳಿ ಪ್ರದೇಶದಲ್ಲಿ 3.28 ಲಕ್ಷ ಮತ್ತು ಒಳನಾಡು ಪ್ರದೇಶದಲ್ಲಿ 6.33 ಲಕ್ಷ ಮೀನುಗಾರಿರುತ್ತಾರೆ. ಮೀನುಗಾರಿಕೆಯಲ್ಲಿ ಕಾರ್ಯನಿರತರಾಗಿರುವ ಸುಮಾರು ಶೇ.25ರಷ್ಟು ಮೀನುಗಾರರು ಸ್ವಂತ ವಸತಿ ಹೊಂದಿರುವುದಿಲ್ಲ. ಈ ನಿರ್ವಸತಿ ಮೀನುಗಾರರಿಗೆ ವಸತಿ ಸೌಕರ್ಯ ನೀಡಲು 1987 ರಿಂದ ಕೇಂದ್ರ ಪುರಸ್ಕೃತ ಯೋಜನೆಯಡಿ ಮನೆಗಳ ನಿರ್ಮಾಣಕ್ಕೆ ಸಹಾಯ ನೀಡಲಾಗುತ್ತಿತ್ತು. ನಂತರ ನಿರ್ವಸತಿ ಮೀನುಗಾರರಿಂದ ಮನೆಗಳಿಗೆ ಹೆಚ್ಚಿನ ಬೇಡಿಕೆ ಇರುವುದರಿಂದ, ಬೇಡಿಕೆಗಳನ್ನು ಪೂರೈಸಲು 1998-1999ನೇ ಸಾಲಿನಿಂದ "ಮತ್ಸ್ಯಾಶ್ರಯ" ಯೋಜನೆಯನ್ನು ಎರಡು ಹಂತಗಳಲ್ಲಿ ಜಾರಿಗೆ ತರಲಾಗಿದ್ದು, ಈ ಯೋಜನೆಯನ್ನು ಕೇಂದ್ರ ಸರ್ಕಾರದ ಶೇ.50 ರ ನೆರವಿನೊಂದಿಗೆ ಅನುಷ್ಠಾನಗೊಳಿಸಲಾಗುತ್ತಿದೆ. ಸದರಿ ಯೋಜನೆಯಡಿಯಲ್ಲಿ ಹುಡ್ಕೋ ಸಾಲದ ನೆರವಿನೊಂದಿಗೆ ಮನೆಗಳ ನಿರ್ಮಾಣವನ್ನು ತೆಗೆದುಕೊಳ್ಳಲಾಗಿದೆ ಎಂದು ತಿಳಿಸಿರುತ್ತಾರೆ.

2006-07 ನೇ ಸಾಲಿನಿಂದ "ಮತ್ಸ್ಯ ಆಶ್ರಯ ಯೋಜನೆ" ಎಂಬ ಯೋಜನೆಯನ್ನು ರಾಜ್ಯದ ಅನುದಾನದಿಂದಲೇ ಪ್ರಾರಂಭಿಸಲಾಗಿದ್ದು, ಇಲ್ಲಿಯವರೆಗೆ 9 ಘಟಕಗಳನ್ನು ಅನುಷ್ಠಾನಗೊಳಿಸಲು ಮಂಜೂರಾತಿ ದೊರಕಿದ್ದು, ಪ್ರಗತಿಯಲ್ಲಿದೆ. ಮನೆಗಳ ನಿರ್ಮಾಣದ ಘಟಕ ವೆಚ್ಚವು ಸಾಮಾನ್ಯ ವರ್ಗದವರಿಗೆ ರೂ.1.20 ಲಕ್ಷ ಹಾಗೂ ಪರಿಶಿಷ್ಟ ಜಾತಿ ಮತ್ತು ಪಂಗಡಕ್ಕೆ ರೂ.1.50 ಲಕ್ಷಗಳಾಗಿರುತ್ತದೆ (ನಗರ ಪ್ರದೇಶದಲ್ಲಿ ಈ ಮೊತ್ತವು ರೂ.1.80 ಲಕ್ಷಗಳಾಗಿರುತ್ತದೆ). ಈ ಯೋಜನೆಯಡಿ ಸಹಾಯಧನವು ಶೇ.100ರಷ್ಟಾಗಿರುತ್ತದೆಂದು ತಿಳಿಸಿರುತ್ತಾರೆ.

ಆದ್ದರಿಂದ, 2016-17 ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿರುವ 3000 ಮನೆಗಳನ್ನು ರೂ.3817.20 ಲಕ್ಷ ವೆಚ್ಚದಲ್ಲಿ ನಿರ್ಮಿಸಲು ಆಡಳಿತಾತ್ಮಕ ಮಂಜೂರಾತಿ ನೀಡುವಂತೆ ಕೋರಿರುತ್ತಾರೆ.

ಮೀನುಗಾರಿಕೆ ನಿರ್ದೇಶಕರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಕೆಳಕಂಡಂತೆ ಆದೇಶಿಸಿದೆ.

**ಆದೇಶ ಸಂಖ್ಯೆ: ಪಸಂಮೀ/81/ಮೀಇಯೋ/2016, ಬೆಂಗಳೂರು ದಿನಾಂಕ: 04-07-2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2016-17ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಿರುವ ಮತ್ಸ್ಯಾಶ್ರಯ ಯೋಜನೆಯಡಿ ವಸತಿ ರಹಿತ ಮೀನುಗಾರರಿಗೆ 3000 ಮನೆಗಳನ್ನು ರೂ.3817.20 ಲಕ್ಷ (ಮೂರು ಸಾವಿರದ ಎಂಟುನೂರ ಹದಿನೇಳು ಲಕ್ಷದ ಇಪ್ಪತ್ತು ಸಾವಿರ ರೂಪಾಯಿಗಳು ಮಾತ್ರ)ಗಳ ವೆಚ್ಚದಲ್ಲಿ ಯೋಜನಾ ಲೆಕ್ಕ ಶೀರ್ಷಿಕೆ 2405-00-103-0-20 ರಡಿ ಹಂತ ಹಂತವಾಗಿ ನಿರ್ಮಿಸಲು ಆಡಳಿತಾತ್ಮಕ ಮಂಜೂರಾತಿ ನೀಡಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ/331/ವೆಚ್ಚ-4/2016, ದಿನಾಂಕ: 24-06-2016ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

4/7/16

(ರಶ್ಮಿ ಶಿವಶಂಕರ ಪೋಳ)
ಸರ್ಕಾರದ ಅಧೀನ ಕಾರ್ಯದರ್ಶಿ
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ
(ಮೀನುಗಾರಿಕೆ)

04/07/16

**ಇವರಿಗೆ:**

1) ಪ್ರಧಾನ ಮಹಾಲೇಖಪಾಲರು (ಜಿ&ಎಸ್ಎಸ್ಎ)(ಇ&ಆರ್ಎಸ್ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಬೆಂಗಳೂರು.
2) ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು.
3) ಮೀನುಗಾರಿಕೆ ನಿರ್ದೇಶಕರು, ಬೆಂಗಳೂರು.
4) ಎಲ್ಲಾ ಜಿಲ್ಲಾಧಿಕಾರಿಗಳಿಗೆ – ಮೀನುಗಾರಿಕೆ ನಿರ್ದೇಶಕರ ಮುಖಾಂತರ
5) ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್ – ಮೀನುಗಾರಿಕೆ ನಿರ್ದೇಶಕರ ಮುಖಾಂತರ.
6) ನಿರ್ದೇಶಕರು (ಪಿಎಫ್‌ಡಿ), ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.

7) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮ ನಿ., ಹೊಯಿಗೆ ಬಜಾರ್, ಮಂಗಳೂರು.

8) ಎಲ್ಲಾ ಮೀನುಗಾರಿಕೆ ಉಪ ನಿರ್ದೇಶಕರುಗಳಿಗೆ – ಮೀನುಗಾರಿಕೆ ನಿರ್ದೇಶಕರ ಮುಖಾಂತರ.

9) ಆಂತರಿಕ ಆರ್ಥಿಕ ಸಲಹೆಗಾರರು, ಕೃ.ತೋ. ಮತ್ತು ಪ.ಸಂ.ಮೀ. ಇಲಾಖೆ.

10) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4), ವಿಧಾನಸೌಧ, ಬೆಂಗಳೂರು.

11) ಮಾನ್ಯ ಯುವಜನ ಸೇವಾ ಮತ್ತು ಮೀನುಗಾರಿಕೆ ರಾಜ್ಯ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.

12) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು / ಸಮನ್ವಯ-ಕಂಪೆಂಡಿಯಮ್.